**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು:560003**

ಸಂಖ್ಯೆ: ಎ8/ಅಧಿಸೂಚನೆ/ಎಸ್.ಎಸ್.ಎಲ್.ಸಿ.ಏಪ್ರಿಲ್–2016/2015–16 ದಿನಾಂಕ: 23–11–2015

**ಸುತ್ತೋಲೆ**

ವಿಷಯ: 2016ನೇ ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ರಾಜ್ಯದ ಪ್ರೌಢ ಶಾಲೆಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ:1) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಈ ಕಛೇರಿಯ ಅಧಿಸೂಚನೆ ಸಮ ಸಂಖ್ಯೆ: ದಿನಾಂಕ: 19–08–2015.

2) ಸರ್ಕಾರದ ಆದೇಶದ ಸಂಖ್ಯೆ: ಇಡಿ 324.ಎಸ್.ಎಲ್.ಬಿ.2015 ದಿ:29.10.2015

1. 2016ನೇ ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪರೀಕ್ಷೆಯ ನೋಂದಣಿಗೆ ಪ್ರೌಢ ಶಾಲೆಗಳಿಂದ ಅರ್ಜಿಗಳನ್ನು ಆಹ್ವಾನಿಸಿ ಉಲ್ಲೇಖ–1 ರಲ್ಲಿ ಅಧಿಸೂಚನೆ ಹೊರಡಿಸಲಾಗಿದೆ.

2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ 176ನೇ ಸರ್ವ ಸದ್ಯಸರ ಸಭೆಯಲ್ಲಿ ತೀರ್ಮಾನಿಸಿದಂತೆ ದಿನಾಂಕ: 19–8–2015ರಂದು ಹೊರಡಿಸಿರುವ ಅಧಿಸೂಚನೆಯ ಪುಟಸಂಖ್ಯೆ: 13 ಕಂಡಿಕೆ–9 ಶಾಲಾ ಸಂಕೇತ ನೀಡಲು **"ಹೊಸದಾಗಿ ಶಾಲಾ ಸಂಕೇತ ಪಡೆಯಲು ಹತ್ತನೇ ತರಗತಿಯಲ್ಲಿ ಕನಿಷ್ಟ 25 ವಿದ್ಯಾರ್ಥಿಗಳ ಹಾಜರಾತಿ ಇರುವುದು ಕಡ್ಡಾಯವಾಗಿರುತ್ತದೆ"**. ಎಂಬುದಾಗಿ ಅಧಿಸೂಚನೆ ಹೊರಡಿಸಲಾಗಿದೆ.

3. **ಉಲ್ಲೇಖ–1ರ ಸರ್ಕಾರಿ ಆದೇಶದ ಸಂಖ್ಯೆ: ಇಡಿ/324/ಎಸ್.ಎಲ್.ಬಿ/2015, ದಿನಾಂಕ: 29–10–2015 ರನ್ವಯ, 2015–16ನೇ ಸಾಲಿಗೆ ಮಾನ್ಯತೆ ಪಡೆದ ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಕನಿಷ್ಟ 25ಕ್ಕಿಂತ ಕಡಿಮೆ ಇದ್ದರೂ ಸಹಾ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಇಂತಹಾ ಶಾಲೆಗಳಿಗೆ ಪ್ರಸ್ತುತ 2015–16ನೇ ಸಾಲಿಗೆ ಶಾಲಾ ಸಂಕೇತ ನೀಡಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಕುಳಿತುಕೊಳ್ಳಲು ಅನುಮತಿಸಿದೆ ಎಂಬುದಾಗಿ ಆದೇಶವಾಗಿರುತ್ತದೆ.**

4. ಈ ಹಿನ್ನೆಲೆಯಲ್ಲಿ ದಿನಾಂಕ: 29–10–2015ರ ಸರ್ಕಾರದ ಆದೇಶ ಸಂಖ್ಯೆ: ಇಡಿ/324/ಎಸ್.ಎಲ್.ಬಿ/2015ನ್ನು ಕಟ್ಟು ನಿಟ್ಟಾಗಿ ಪಾಲಿಸಬೇಕೆಂದು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಲಾಗಿದೆ.

23/11/15

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ
ಅಧ್ಯಕ್ಷರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ.

ಪ್ರತಿಗಳು:

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ.
3. ನಿರ್ದೇಶಕರು(ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಕ್ರಮಕ್ಕಾಗಿ
6. ಕಛೇರಿ ಪ್ರತಿ.